**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**<u>ಫೌಜುದಾರಿ ಪ್ರಕರಣ ಸಂಖ್ಯೆ : 90/2020</u>**

**ಚಾ.ಸಾಃ 7, ಫ್ರಾ.ಸಾಃ 6**

| | |
|---|---|
| ಸಾಕ್ಷಿದಾರನ ಹೆಸರು | ವಿನಾಯಕ ಭಟ್ಟ |
| ತಂದೆಯ ಹೆಸರು | ಸುಬ್ರಹ್ಮಣ್ಯ ಭಟ್ಟ |
| ವಯಸ್ಸು | 50 ವರ್ಷಗಳು |
| ಉದ್ಯೋಗ | ರೈತಾಬಿ |
| ವಾಸ್ತವ್ಯ | ಸಾಲ್ಕೋಡ |

**<u>ಸಾಕ್ಷಿಯನ್ನು ದಿನಾಂಕಃ 26-05-2023 ರಂದು ಕರೆಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಎಪಿಪಿಯವರಿಂದ,</u>**

ಸಾಕ್ಷಿಗೆ ಈ ಪ್ರಕರಣದಲ್ಲಿ ಹಾಜರು ಮಾಡಿರುವ ನಿಪಿ-7 ಆಭರಣಗಳ ಜಪ್ತು ಪಂಚನಾಮೆಯ ನೈಜ ಪ್ರತಿಯನ್ನು ತೋರಿಸಲಾಗಿ ಅದರ ಮೇಲಿನ ಒಂದು ಸಹಿಯನ್ನು ತನ್ನದು ಎಂದು ತಿಳಿಸಿದ್ದರಿಂದ ನಿಪಿ-7 ರ ಮೇಲಿನ ಸಾಕ್ಷಿ ಸಹಿಯನ್ನು ನಿಪಿ-7(ಬಿ)ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ದಿನಾಂಕ 05-08-2020 ರಂದು ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಚಾಸಾ-11 ಸಂದೀಪ ಶೆಟ್ಟರು ನನ್ನ ಹಾಜರಾತಿಯಲ್ಲಿ ಒಂದು ಕರಿಮಣಿ ಸರ, ಒಂದು ಪವನ ಸರ ಮತ್ತು ಒಂದು ಜೊತೆ ಕಿವಿಯೋಲೆ ಹಾಜರು ಮಾಡಿರುತ್ತಾರೆ. ಸದರಿ ಆಭರಣಗಳನ್ನು ಇಬ್ಬರು ಕಳ್ಳರು ಕಳ್ಳತನ ಮಾಡಿರುವುದಾಗಿ ಪೋಲಿಸರು ತಿಳಿಸಿರುತ್ತಾರೆ. ಸದರಿ ಆಭರಣಗಳನ್ನು ಚಾಸಾ-14 ದೀಪಕ್ ಶೆಟ್ಟರವರು ತೂಕ ಮಾಡಿ ಮೌಲ್ಯಮಾಪನ ಮಾಡಿರುತ್ತಾರೆ. ಆ ಸಂದರ್ಭದಲ್ಲಿ ಪಂಚನಾಮೆ ಮಾಡಿ ಛಾಯಾಚಿತ್ರವನ್ನು ತೆಗಸಿರುತ್ತಾರೆ. ಛಾಯಾಚಿತ್ರವನ್ನು ಸಾಕ್ಷಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-8 ಎಂದು ಗುರುತಿಸಲಾಗಿದೆ.

ಸದರಿ ಆಭರಣಗಳನ್ನು ನೋಡಿದರೆ ಗುರುತಿಸುತ್ತೇನೆ. ಈ ಪ್ರಕರಣದಲ್ಲಿ ಹಾಜರು ಮಾಡಿರುವ ಬಂಗಾರದ ಆಭರಣಗಳನ್ನು ಈಗಾಗಲೇ ಮುಮಾ-1 ರಿಂದ 3 ಎಂದು ಗುರುತಿಸಲಾಗಿರುತ್ತದೆ ಮತ್ತು ಸದರಿ ಆಭರಣಗಳನ್ನು ಈಗಾಗಲೇ ಚಾಸಾ-1 ರವರ ಮಧ್ಯಂತರ ಸ್ವಾಧೀನಕ್ಕೆ ನೀಡಲಾಗಿದೆ. ಸದರಿ ಆಭರಣ ಮಧ್ಯಂತರ ಸ್ವಾಧೀನ ನೀಡುವ ಸಂದರ್ಭದಲ್ಲಿ ಛಾಯಾಚಿತ್ರಗಳನ್ನು ತೆಗೆಸಲಾಗಿದ್ದು, ಛಾಯಾಚಿತ್ರದಲ್ಲಿರುವ ಆಭರಣಗಳನ್ನು ಸಾಕ್ಷಿ ಗುರುತಿಸಿರುತ್ತಾರೆ. ಆದ್ದರಿಂದ ಸದರಿ ಛಾಯಾಚಿತ್ರಗಳನ್ನು ನಿಪಿ-9 ಮತ್ತು 10 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಿಂದಃ ಶ್ರೀ ವಿಠ್ಠಲ ಎಂ. ಭಂಡಾರಿಯವರಿಂದಃ</u>**

ಸದರಿ ದಿನದಂದು ನಾನು ಒಂದು ಪಂಚನಾಮೆಗೆ ಮಾತ್ರ ಸಹಿ ಮಾಡಿರುತ್ತೇನೆ. ಸದರಿ ಪಂಚನಾಮೆಗೆ ನನ್ನನ್ನು ಬಿಟ್ಟು ಮತ್ತೊಬ್ಬರು ಸಹಿ ಮಾಡಿರುತ್ತಾರೆ. ನಾನು ಠಾಣೆಗೆ ಹೋಗುವ

ಪೂರ್ವದಲ್ಲಿಯೇ ಆಭರಣಗಳು ಟೇಬಲ್ ಮೇಲೆ ಇದ್ದವು. ನನ್ನ ಸಮಕ್ಷಮ ಆಭರಣಗಳನ್ನು ಯಾರು ಹಾಜರು ಮಾಡಿರುವುದಿಲ್ಲ.

ಸದರಿ ದಿನದಂದು ನಾನು ಠಾಣೆಗೆ ಹೋಗಿಲ್ಲ, ಪೋಲಿಸರು ನನ್ನ ಸಮಕ್ಷಮ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ಆಭರಣಗಳನ್ನು ಜಪ್ತು ಮಾಡಿಕೊಂಡಿಲ್ಲ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇರುವುದಿಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**